# ಅಂತರರಾಷ್ಟ್ರೀಯ ಶಾಲಾ-ಕಾಲೇಜು ಮುಖ್ಯಸ್ಥರ ಶೃಂಗ

ಪ್ರಜಾವಾಣಿ ವಾರ್ತೆ

ಆನೇಕಲ್: ಪಟ್ಟಣಕ್ಕೆ ಸಮೀಪದ ಅಲಯನ್ಸ್ ವಿಶ್ವವಿದ್ಯಾಲಯದಲ್ಲಿ ಅಂತರರಾಷ್ಟ್ರೀಯ ಶಾಲಾ ಕಾಲೇಜುಗಳ ಮುಖ್ಯಸ್ಥರ ಶೃಂಗಸಭೆ ಆಯೋಜಿಸಲಾಯಿತು. ವಿವಿಧ ಕಾಲೇಜುಗಳ ಮುಖ್ಯಸ್ಥರು ಭಾಗಿಯಾಗಿದ್ದ ಈ ಶೃಂಗಸಭೆಯಲ್ಲಿ ಪರಿವರ್ತನೆಗಾಗಿ ಶಿಕ್ಷಣ ಎಂಬ ವಿಷಯದ ಕುರಿತು ಚರ್ಚೆ, ಸಂವಾದ, ವಿಚಾರ ಸಂಕಿರಣ ನಡೆಯಿತು.

ಅಲಯನ್ಸ್ ವಿಶ್ವವಿದ್ಯಾಲಯದ ಸಹ ಕುಲಪತಿ ಅಭಯ್.ಜಿ.ಛೆಬ್ಬಿ ಮಾತನಾಡಿ, ಉನ್ನತ ಶಿಕ್ಷಣ ಪಡೆಯಲು ಆಸಕ್ತಿ ಹೊಂದಿದ ಯುವ ಪ್ರತಿಭೆಗಳಿಗೆ ಸೂಕ್ತ ಅವಕಾಶಗಳನ್ನು ಕಲ್ಪಿಸಿ ಕೊಡಬೇಕು ಎಂದು ಹೇಳಿದರು.

ಆಧುನಿಕ ತಂತ್ರಜ್ಞಾನವನ್ನು ಶಿಕ್ಷಣದಲ್ಲಿ ಅಳವಡಿಸಿಕೊಂಡು ಗುಣಮಟ್ಟದ ಬೋಧನೆ ಮಾಡುವ ಮೂಲಕ ವಿದ್ಯಾರ್ಥಿಗಳು ಸಮಾಜಕ್ಕೆ ಆಸ್ತಿಯಾಗುವಂತೆ ಮಾಡಬೇಕು. ಜಾಗತಿಕ ಮಟ್ಟದ ಸವಾಲುಗಳನ್ನು ಎದುರಿಸುವ ಕೌಶಲವನ್ನು ಶಿಕ್ಷಣದಲ್ಲಿ ಬೆಳೆಸಬೇಕಾಗಿದೆ. ಈ ನಿಟ್ಟಿನಲ್ಲಿ ವಿವಿಧ ಶಾಲಾ ಕಾಲೇಜುಗಳ ಮುಖ್ಯಸ್ಥರು ಹೊಸ ದೃಷ್ಟಿಕೋನದ ಬಗ್ಗೆ ತಮ್ಮ ಅನುಭವಗಳ ಬೆಳಕು ಚೆಲ್ಲಬೇಕು ಎಂದರು.

ವಿದ್ಯಾರ್ಥಿ ಜೀವನದ ತಳಹದಿಯಲ್ಲಿ ಗುಣಾತ್ಮಕ ಶಿಕ್ಷಣ ನೀಡಿ ತಳಹದಿಯನ್ನು ಭದ್ರಪಡಿಸಬೇಕು. ಭದ್ರ ಬುನಾದಿಯು ಉನ್ನತ ಶಿಕ್ಷಣ ಪಡೆಯಲು ಸಾಧ್ಯವಾಗುತ್ತಿದೆ. ಶಾಲಾ ಕಾಲೇಜುಗಳಲ್ಲಿ ಮೂಲ ಶಿಕ್ಷಣಕ್ಕೆ ಆದ್ಯತೆ ಕಲ್ಪಿಸಬೇಕು ಎಂದರು.

ವಿಶ್ವವಿದ್ಯಾಲಯ ಉಪ ಕುಲಪತಿ ಡಾ.ಅನುಬಾ ಸಿಂಗ್ ಮಾತನಾಡಿದರು.

ಅಲಯನ್ಸ್ ವಿಶ್ವವಿದ್ಯಾಲಯದ ಆಡಳಿತ ಮಂಡಳಿತ ಸುರೇಖಾ ಶೆಟ್ಟಿ, ಇಂದೋರ್‌ನ ಚೋಯಿತ್ರಮ್ ಸ್ಕೂಲ್‌ನ ಉತ್ತಮ್‌ಕುಮಾರ್, ಚೆನ್ನೈ ಪಬ್ಲಿಕ್ ಸ್ಕೂಲ್‌ನ ಚಿತ್ರಕಲಾ ರಾಮಚಂದ್ರನ್, ಪ್ರೋಡರ್ ಇಂಟರ್‌ನ್ಯಾಷನಲ್ ಕಾಲೇಜಿನ ಸುಚಿತಾ ಮಾಲಾಕರ್, ಅಲಯನ್ಸ್ ಕಾಲೇಜ್ ಆಫ್ ಲಿಬರಲ್ ಆರ್ಟ್‌ನ ಡಾ.ಜುಲೀನ್ ಪ್ಯಾರೆಟ್, ಶಾರ್ಜ ಇಂಡಿಯನ್ ಸ್ಕೂಲ್‌ನ ಡಾ.ಪ್ರಮೋದ್ ಮಹಾಜನ್, ಹೈದರಬಾದ್‌ನ ಪಾಣಿನಿಯ ವಿಶ್ವವಿದ್ಯಾಲಯದ ಡಾ.ದಂಡಿ ವಸುದಾ ರಾಣಿ ಇದ್ದರು.



ಆನೇಕಲ್ ಸಮೀಪದ ಅಲಯನ್ಸ್ ವಿಶ್ವವಿದ್ಯಾಲಯದಲ್ಲಿ ಅಂತರರಾಷ್ಟ್ರೀಯ ಶಾಲಾ ಕಾಲೇಜುಗಳ ಮುಖ್ಯಸ್ಥರ ಶೃಂಗಸಭೆಯಲ್ಲಿ ಪಾಲ್ಗೊಂಡಿದ್ದ ವಿವಿಧ ಶಾಲಾ ಕಾಲೇಜುಗಳ ಮುಖ್ಯಸ್ಥರು